ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1418

ಮಾನ್ಯ ಸದಸ್ಯರ ಹೆಸರು : ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 23.09.2021

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯ ಸರ್ಕಾರದ ಅಧೀನದಲ್ಲಿ ಬರುವ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಪಿಂಚಣಿ ವ್ಯವಸ್ಥೆಯಡಿಯಲ್ಲಿ ತರುವ ಸರ್ಕಾರದ ಕ್ರಮವೇನು;	ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015ರ ರಲ್ಲಿ ರಾಜ್ಯ ಸ್ವಾಯತ್ತ ಸಂಸ್ಥೆಗಳು / ಮಂಡಳಿಗಳು / ನಿಗಮಗಳು / ಸಂಘಗಳು / ವಿಶ್ವವಿದ್ಯಾನಿಲಯಗಳು / ರಾಜ್ಯ ಅನುದಾನಿತ ಸಂಸ್ಥೆಗಳು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಅಡಿಯಲ್ಲಿರುವ ಸಂಸ್ಥೆಗಳು ದಿನಾಂಕ:01.04.2006 ಕ್ಕಿಂತ ಮೊದಲು ನೇಮಕ ಗೊಂಡ ನೌಕರರಿಗೆ ಅಳವಡಿಸಿಕೊಂಡಿರುವ ಹಳೆಯ ಪಿಂಚಣಿ ಯೋಜನೆಯನ್ನು ನಿಲ್ಲಿಸಿ, ದಿನಾಂಕ: 01.04.2006 ರಂದು ಅಥವಾ ತದನಂತರ ನೇಮಕಗೊಂಡ ನೌಕರರುಗಳಿಗೆ ಹೊಸ ಪಿಂಚಣಿ ಯೋಜನೆಯನ್ನು ಕಡ್ಡಾಯವಾಗಿ ಅಳವಡಿಸಿ ಕೊಳ್ಳಬೇಕು ಮತ್ತು ಈ ಯೋಜನೆಗೆ ಉದ್ಯೋಗದಾತರ ಕೊಡುಗೆಯನ್ನು ಅವರ ಸ್ವಂತ ಸಂಪನ್ಮೂಲಗಳಿಂದ ಭರಿಸಬೇಕೆಂದು ಆದೇಶಿಸಿದೆ.
ಆ)	ಈ ನೌಕರರಿಗೆ ಹೊಸ ಪಿಂಚಣಿ ವ್ಯವಸ್ಥೆಯನ್ನು ತರಲು ಇರುವ ಸಮಸ್ಯೆಗಳೇನು;	
ಇ)	ಈ ಸಮಸ್ಯೆಗಳನ್ನು ಸರಿಪಡಿಸಿ ಈ ಎಲ್ಲಾ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ, ನಿಗಮ ಮಂಡಳಿಗಳಲ್ಲಿ ಹಾಗೂ ಸ್ವಾಯತ್ತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುವ ನೌಕರರಿಗೂ ಹೊಸ ಪಿಂಚಣಿ ಯೋಜನೆಗೆ ಒಳಪಡಿಸಲು ಸರ್ಕಾರ ಕ್ರಮವಹಿಸುವುದೇ?	

ಆಇ 164 ಪಿಇಎನ್ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ